ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದಿರುವ ಕುರಿತು

ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)

143 (1049) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಬೀದರ್ ಜಿಲ್ಲೆಯಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಕಟ್ಟಡಗಳು ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಎಷ್ಟು ಕಟ್ಟಡಗಳನ್ನು ದುರಸ್ತಿಗೊಳಿಸಬೇಕಾಗಿರುತ್ತದೆ ; (ಗ್ರಾಮಗಳವಾರು, ಶಾಲಾವಾರು ಸಂಪೂರ್ಣ ವಿವರ ನೀಡುವುದು)

(ಇ) ಕಟ್ಟಡಗಳನ್ನು ದುರಸ್ತಿ ಮಾಡಲು ಅಥವಾ ಹೊಸ ಕಟ್ಟಡಗಳನ್ನು ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; (ವಿವರ ನೀಡುವುದು)

(ಈ) ಹಾಗಿದ್ದಲ್ಲಿ, ಶಾಲಾ ಕೊಠಡಿ/ಶೌಚಾಲಯಗಳ ದುರಸ್ತಿ ಮತ್ತು ನಿರ್ಮಾಣ ಕಾರ್ಯವನ್ನು ಪ್ರಾರಂಭಿಸುವುದು ಯಾವಾಗ ? (ಮಾಹಿತಿ ನೀಡುವುದು)